ಪರಿಶಿಷ್ಟ ಜಾತಿಯ ಸ್ತ್ರೀ ಶಕ್ತಿ ಸಂಘಗಳಿಗೆ ಕೊಡುವಂತಹ 10,000/– ರೂ.ಗಳ ಸಹಾಯಧನವನ್ನು ಪರಿಶಿಷ್ಟ ಪಂಗಡಗಳ ಸ್ತ್ರೀ ಶಕ್ತಿ ಸಂಘಗಳಿಗೆ ಕೊಡುವ ವಿಚಾರ ಪರಿಶೀಲನೆಯಲ್ಲಿದೆ.

ಸಂಖ್ಯೆ:ಸಕಇ 35 ಪವಯೋ 2009

(ಡಿ.ಸುಧಾಕರ)
ಸಮಾಜ ಕಲ್ಯಾಣ ಸಚಿವರು

<u>ಕರ್ನಾಟಕ ವಿಧಾನ ಸಭೆ</u>

131 ಶ್ರೀ. ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

ಅ) ಕೊಪ್ಪಳ ನಗರದ ಜಿಲ್ಲಾ ಆಸ್ಪತ್ರೆ ಕಟ್ಟಡದ ಕಾಮಗಾರಿಯು ಪ್ರಾರಂಭವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಜಿಲ್ಲಾ ಆಸ್ಪತ್ರೆ ಕಟ್ಟಡ ನಿರ್ಮಾಣಕ್ಕೆ ಕೊಪ್ಪಳ ಜಿಲ್ಲಾಡಳಿತವು ಸ್ವಾಧೀನ ಪಡಿಸಿಕೊಂಡಿರುವ ಜಮೀನು (ಸ.ನಂ.205/2,266 ಮತ್ತು 267/1 ಒಟ್ಟು 9.30 ಎಕರೆ) ವಿವಾಧ ಉಚ್ಚನ್ಯಾಯಾಲಯದಲ್ಲಿ ಇರುವುದರಿಂದ ಕಾಮಗಾರಿಯನ್ನು ಪ್ರಾರಂಭಿಸಿರುವುದಿಲ್ಲ.

ಆ) ಹಾಗಿದ್ದಲ್ಲಿ, ಈ ಕಟ್ಟಡ ಕಾಮಗಾರಿಗಾಗಿ ಸರ್ಕಾರ ಈವರೆಗೂ ಖರ್ಚು ಮಾಡಿರುವ ಮೊತ್ತ ಎಷ್ಟು?

ಈವರೆಗೂ ಹಣ ಖರ್ಚು ಮಾಡಿರುವುದಿಲ್ಲ.

ಇ) ಈ ಕಾಮಗಾರಿಯನ್ನು ಪೂರ್ಣಗೊಳಿಸಲು ಈಗ ನೀಡಿರುವ ಅನುದಾನ ಸಾಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಉದ್ಭವಿಸುವುದಿಲ್ಲ.

ಈ) ಹಾಗಿದ್ದಲ್ಲಿ, ಬಿಡುಗಡೆ ಮಾಡಲಾಗುವ ಅನುದಾನದ ಪ್ರಮಾಣ ಎಷ್ಟು ಹಾಗೂ ಯಾವಾಗ ಬಿಡುಗಡೆ ಮಾಡಲಾಗುವುದು?

ಉದ್ಭವಿಸುವುದಿಲ್ಲ.

ಉ) ಜಿಲ್ಲಾ ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯರು ಹಾಗೂ ಇತರೆ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಜಿಲ್ಲಾ ಆಸ್ಪತ್ರೆ ಕೊಪ್ಪಳ ಜಿಲ್ಲೆ, ಇಲ್ಲಿ ಮಂಜೂರಾದ 10 ತಜ್ಞ ವೈದ್ಯರ ಹುದ್ದೆಗಳ ಪೈಕಿ 7 ತಜ್ಞ ವೈದ್ಯರುಗಳು ಕಾರ್ಯ ನಿರ್ವಹಿಸುತ್ತಿದ್ದಾರೆ. ಸದರಿ ಆಸ್ಪತ್ರೆಯಲ್ಲಿ ಇಟ್ಟು 63 ಅರೆ ವೈದ್ಯಕೀಯ ಸಿಬ್ಬಂದಿ ಹುದ್ದೆ ಮಂಜೂರಾಗಿದ್ದು, 27 ಸಿಬ್ಬಂದಿಗಳು ಕಾರ್ಯ ನಿರ್ವಹಿಸುತ್ತಿದ್ದಾರೆ. 36 ಹುದ್ದೆಗಳು ಖಾಲಿ ಇವೆ.

ಊ) ಹಾಗಿದ್ದಲ್ಲಿ, ವೈದ್ಯರ ಹಾಗೂ ಇತರೆ ಸಿಂಬ್ಬದಿಗಳ ಕೊರತೆ ನೀಗಿಸಲು ಸರ್ಕಾರ ಕ್ರಮಕೈಗೊಳ್ಳುವುದೇ?

ತಜ್ಞ ವೈದ್ಯರ ಹುದ್ದೆಗಳನ್ನು ತಾತ್ಕಾಲಿಕವಾಗಿ ನಿವೃತ್ತ ತಜ್ಞ ವೈದ್ಯರುಗಳನ್ನು ಸಂದರ್ಶಕ ತಜ್ಞ ವೈದ್ಯರುಗಳನ್ನಾಗಿ ನೇಮಿಸಿಕೊಳ್ಳಲು ಜಿಲ್ಲಾ ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲಾಗಿದೆ. ಇಲಾಖೆಯಲ್ಲಿ ಸೇವಾನಿರತ ವೈದ್ಯರುಗಳು ಸ್ನಾತಕೋತ್ತರ ಪದವಿ ಪಡೆದು ಬಂದ ನಂತರ ತಜ್ಞ ವೈದ್ಯರುಗಳನ್ನು ಆದ್ಯತೆ ಮೇರೆಗೆ ಭರ್ತಿ ಮಾಡಲು ಸಹ ಕ್ರಮ ಕೈಗೊಳ್ಳಲಾಗುವುದು.

ಆರೋಗ್ಯ ಇಲಾಖೆಯಲ್ಲಿ ಖಾಲಿ ಇರುವ 5021 ಅರೆವೈದ್ಯಕೀಯ ಹುದ್ದೆಗಳನ್ನು ವಿಶೇಷ ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಲು, ನೇಮಕಾತಿ ನಿಯಮಗಳ ಕರಡು ಅಧಿಸೂಚನೆಯನ್ನು ಆಕ್ಷೇಪಣೆ/ಸಲಹೆ ಸಲ್ಲಿಸಲು 15 ದಿನಗಳ ಕಾಲಾವಕಾಶ ನೀಡಿ ದಿನಾಂಕ: 7-2-2009 ರಂದು ಹೊರಡಿಸಲಾಗಿದೆ. ಸದರಿ ನಿಯಮಗಳು ಅಂತಿಮಗೊಂಡ ನಂತರ ನೇಮಕಾತಿ ಪ್ರಕ್ರಿಯೆ ಪ್ರಾರಂಭಗೊಳ್ಳುತ್ತದೆ. ಅಭ್ಯರ್ಥಿಗಳು ಲಭ್ಯವಾದ ನಂತರ ಖಾಲಿ ಹುದ್ದೆಗಳನ್ನು ಆದ್ಯತೆ ಮೇಲೆ ಭರ್ತಿ ಮಾಡಲಾಗುವುದು.

ಋ) ಜಿಲ್ಲಾ ಸಾರ್ವಜನಿಕ ಆಸ್ಪತ್ರೆಯಲ್ಲಿ ಮೂಲಭೂತ ಸೌಲಭ್ಯ ಹಾಗೂ ವೈದ್ಯಕೀಯ ಉಪಕರಣಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಕೊಪ್ಪಳ ಜಿಲ್ಲಾ ಆಸ್ಪತ್ರೆಯು ಪ್ರಸ್ತುತ 66 ಹಾಸಿಗೆಗಳ ಸಾಮರ್ಥ್ಯವನ್ನು ಹೊಂದಿದ್ದು, ಅದಕ್ಕನುಗುಣವಾಗಿ ಮೂಲಸೌಕರ್ಯ ಹಾಗೂ ಉಪಕರಣಗಳನ್ನು ಹೊಂದಿರುತ್ತದೆ. ಹಾಲಿ ಹೊರರೋಗಿ, ಒಳರೋಗಿ, ಹೆರಿಗೆ ಸೇವಾ ಸೌಲಭ್ಯ, ಕ್ಷ-ಕಿರಣ ಸೌಲಭ್ಯ, ಪ್ರಯೋಗಾಲಯ ಸೇವೆಗಳು, ಏಡ್ಸ್ ರೋಗದ ಬಗ್ಗೆ ತಿಳುವಳಿಕೆ, ಆಂಬ್ಯುಲನ್ಸ್ ಸೇವೆ, ಉಚಿತ ಔಷಧಿ ಪೂರೈಕೆ, ತುರ್ತು ಚಿಕಿತ್ಸೆ ಸೇವೆಯು ಲಭ್ಯವಿರುತ್ತದೆ.

ಎ) ಹಾಗಿದ್ದಲ್ಲಿ, ಮೂಲಭೂತ ಸೌಲಭ್ಯ ಹಾಗೂ ವೈದ್ಯಕೀಯ ಉಪಕರಣಗಳನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಉದ್ಭವಿಸುವುದಿಲ್ಲ.

ಸಂಖ್ಯೆ: ಆಕುಕ 135 ಸಿಜಿಎಂ 2009

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು